ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ--೧೯

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

## ಗುರುವಾರ, ದಿನಾಂಕ: ೧೭ನೇ ಜುಲೈ, ೨೦೧೪

---

**ಸಮೂಹ – IV**

೧. ಮುಖ್ಯಮಂತ್ರಿಗಳು

೨. ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

---

### ಬಿಜಾಪುರ ಮತ್ತು ಜೇವರ್ಗಿ ಮಧ್ಯೆ ಇರುವ ಹೆದ್ದಾರಿಯಲ್ಲಿನ ಅಪಘಾತಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೨೭೧ (೧೫೨೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಜಾಪೂರ ಹಾಗೂ ಜೇವರ್ಗಿ ಮಧ್ಯೆ ಇರುವ ಹೆದ್ದಾರಿಯಲ್ಲಿ ಕಳೆದ ೦೨ ವರ್ಷಗಳಲ್ಲಿ ಎಷ್ಟು ಅಪಘಾತ ಪ್ರಕರಣಗಳು ನಡೆದಿವೆ ;

(ಆ) ಇದರಲ್ಲಿ ಪ್ರಾಣ ಹಾನಿಯಾದ ಅಪಘಾತಗಳು ಯಾವುವು ಮತ್ತು ಎಷ್ಟು ; ಯಾವ ವಾಹನಗಳು ಅಪಘಾತಕ್ಕೀಡಾಗಿವೆ ; (ಸಂಪೂರ್ಣ ವಿವರ ನೀಡುವುದು)

(ಇ) ಬಿಜಾಪೂರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಸಿವಿಲ್ ಪೋಲೀಸ್ ಸಿಬ್ಬಂದಿಯ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಈ) ಇವರಲ್ಲಿ ಇಲಾಖೆಯ ವಸತಿ ಗೃಹ ಸೌಲಭ್ಯ ಪಡೆದುಕೊಂಡವರ ಅಥವಾ ಅದರಲ್ಲಿ ವಾಸಿಸುತ್ತಿರುವವರ ಸಂಖ್ಯೆ ಎಷ್ಟು ;

(ಉ) ಹಾಲಿ ಇನ್ನು ಎಷ್ಟು ವಸತಿ ಗೃಹಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗಿದೆ ಮತ್ತು ಕೈಗೊಳ್ಳಲು ಉದ್ದೇಶಿಸಲಾಗಿದೆ ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ನಗರೋತ್ಥಾನ ಯೋಜನೆಯಡಿ ಕಾಮಗಾರಿ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೭೨ (೧೫೨೮) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬಳ್ಳಾರಿ ಮಹಾನಗರ ಪಾಲಿಕೆಗೆ ನಗರೋತ್ಥಾನ ಯೋಜನೆಯಡಿ ಬಿಡುಗಡೆಯಾದ ಮೊತ್ತವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಈ ಮೂರು ವರ್ಷಗಳಲ್ಲಿ ಬಿಡುಗಡೆ ಮಾಡಲಾದ ಮೊತ್ತದಲ್ಲಿ ಎಷ್ಟು ಮೊತ್ತದ ಕಾಮಗಾರಿ ಕೈಗೊಂಡಿದೆ ; ಖರ್ಚಾಗದೇ ಉಳಿದ ಹಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಈ ಯೋಜನೆ ಅನ್ವಯ ಕೈಗೊಂಡ ಕಾಮಗಾರಿಗಳು ಯಾವುವು ? (ಕಳೆದ ಮೂರು ವರ್ಷವಾರು ವಿವರ ನೀಡುವುದು)

## ಕಬ್ಬಿಣದ ಅದಿರಿನ ಉತ್ಪಾದನೆ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೭೩ (೧೪೭೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎ, ಬಿ ಮತ್ತು ಸಿ ಶ್ರೇಣಿಯ ಕಬ್ಬಿಣದ ಅದಿರಿನ ಗಣಿಗಳು ಯಾವುವು ;

(ಆ) ಪ್ರಸ್ತುತ "ಎ" ಶ್ರೇಣಿಯ ಗಣಿಗಳಿಂದ ಉತ್ಪಾದನೆ ಮಾಡುತ್ತಿರುವ ಕಬ್ಬಿಣದ ಅದಿರಿನ ಪ್ರಮಾಣವೆಷ್ಟು ;

(ಇ) ಕಬ್ಬಿಣದ ಅದಿರಿನ ಕೊರತೆಯಿಂದಾಗಿ ಕಟ್ಟಡ ನಿರ್ಮಾಣದ ಕಾಮಗಾರಿಯ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

**ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿರುವುದು**

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೭೪ (೧೪೭೧) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿದ್ದು, ಸಾರ್ವಜನಿಕರಿಗೆ ಅದರಲ್ಲೂ ವಿಶೇಷವಾಗಿ ಹೆಣ್ಣು ಮಕ್ಕಳು ತೊಂದರೆ ಅನುಭವಿಸುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ಮಹಿಳೆಯರ ಮೇಲೆ ನಡೆದಿರುವ ದೌರ್ಜನ್ಯ ಪ್ರಕರಣಗಳು ಎಷ್ಟು ;

(ಇ) ಇಂತಹ ಎಷ್ಟು ಪ್ರಕರಣಗಳಲ್ಲಿ ಕಾನೂನು ಕ್ರಮ ಜರುಗಿಸಲಾಗಿದೆ ?

**ಸಿಐಐ ೨೦ನೇ ಪಾರ್ಟ್‌ನರ್‌ಶಿಪ್ ಸಮ್ಮಿಟ್--೨೦೧೪**

**ಡಾ. ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು ) –**

೨೭೫ (೧೪೫೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಐಐ ೨ನೇ ಪಾರ್ಟ್‌ನರ್‌ಶಿಪ್ ಸಮ್ಮಿಟ್–೨೦೧೪ನ್ನು ಯಾವ ಉದ್ದೇಶಗಳಿಗಾಗಿ ಸಂಘಟಿಸಲಾಗಿತ್ತು ;

(ಆ) ಸದರಿ ಸಮ್ಮಿಟ್ ಯಶಸ್ವಿಯಾಗಿದೆಯೇ ; ಇದಕ್ಕಾಗಿ ತಗಲಿದ ವೆಚ್ಚವೆಷ್ಟು ;

(ಇ) ಈ ಹಿನ್ನೆಲೆಯಲ್ಲಿ ಒಟ್ಟು ಎಷ್ಟು ಜನ ಬಂಡವಾಳದಾರರು ಹಣ ಹೂಡಿಕೆ ಮಾಡಲಿದ್ದಾರೆ ; (ವಿವರಗಳನ್ನು ನೀಡುವುದು)

(ಈ) ಈ ಸಮ್ಮಿಟ್‌ನ್ನು ಏರ್ಪಡಿಸುವಲ್ಲಿ ಸಿಐಐ ನಿರ್ವಹಿಸಿದ ಪಾತ್ರವೇನು ; ಸದರಿ ಸಂಸ್ಥೆಯು ಹಣ ಪ್ರಚಾರ ಮತ್ತು ತನ್ನ ವಹಿವಾಟು ಹೆಚ್ಚಿಸಿಕೊಳ್ಳಲು ಈ ಮೂಲಕ ಪ್ರಯತ್ನಿಸುತ್ತಿಲ್ಲವೆ ?

## ಬಿ.ಬಿ.ಎಂ.ಪಿ. ಯ ಖಾಲಿ ಜಾಗ ಮತ್ತು ಕಟ್ಟಡಗಳು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು)** –

೨೭೬ (೧೫೦೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿರುವ ಬಿ.ಬಿ.ಎಂ.ಪಿ. ಒಡೆತನದ ಖಾಲಿ ಜಾಗ ಮತ್ತು ಕಟ್ಟಡಗಳು ಎಷ್ಟು ; ಯಾವ ಪ್ರದೇಶ ವ್ಯಾಪ್ತಿಯಲ್ಲಿ ಈ ಆಸ್ತಿಗಳನ್ನು ಗುರುತಿಸಲಾಗಿದೆ ; (ಪ್ರತ್ಯೇಕವಾದ ಮಾಹಿತಿ ಒದಗಿಸುವುದು)

(ಆ) ಈ ಜಾಗಗಳನ್ನು ವಿವಿಧ ಉದ್ದೇಶಗಳಿಗಾಗಿ ಗುತ್ತಿಗೆ ನೀಡಲಾಗಿದೆಯೇ ; ಹಾಗಿದ್ದಲ್ಲಿ, ನೀಡಲಾದ ಉದ್ದೇಶ, ಜಾಗ ವಿಸ್ತೀರ್ಣ, ಗುತ್ತಿಗೆ ನೀಡಲಾದ ಅವಧಿ ಮತ್ತು ಇದರಿಂದ ಪಾಲಿಕೆ ಬೊಕ್ಕಸಕ್ಕೆ ಸಂದಾಯವಾಗುತ್ತಿರುವ ವಾರ್ಷಿಕ ಆದಾಯ ಇವುಗಳ ಪ್ರತ್ಯೇಕ ಮತ್ತು ಸಂಪೂರ್ಣ ಮಾಹಿತಿ ಒದಗಿಸುವುದು ;

(ಇ) ಪಾಲಿಕೆ ಜಾಗ ಹಾಗೂ ಕಟ್ಟಡಗಳನ್ನು ತೀರಾ ಕನಿಷ್ಟ ಬೆಲೆಗೆ ಗುತ್ತಿಗೆ ನೀಡಲಾಗಿದ್ದು, ಇದರಿಂದ ವಾರ್ಷಿಕ ಕೋಟ್ಯಾಂತರ ರೂಪಾಯಿಗಳ ನಷ್ಟ ಆಗುತ್ತಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ? (ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು)

## ಬಿ.ಬಿ.ಎಂ.ಪಿ. ಯಿಂದ ವಿವಿಧ ಸಂಘ ಸಂಸ್ಥೆಗಳಿಗೆ ದೇಣಿಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೨೭೭ (೧೫೩೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆರ್ಥಿಕ ವ್ಯವಸ್ಥೆ ಸುಧಾರಿಸಿದೆಯೇ ;

(ಆ) ಕಳೆದ ಹಲವಾರು ವರ್ಷಗಳಿಂದ ಸಂಘ ಸಂಸ್ಥೆಗಳಿಗೆ ಸಹಾಯಧನ, ದೇಣಿಗೆ, ಇತ್ಯಾದಿ ನೀಡುತ್ತಿದ್ದು, ಇದು ಎಂದಿನಿಂದ ಜಾರಿಗೆ ಬಂದಿತು ; ದೇಣಿಗೆ ನೀಡಲು ಬಿ.ಬಿ.ಎಂ.ಪಿ. ಅನುಸರಿಸುವ ಮಾನದಂಡವೇನು ;

(ಇ) ಆರ್ಥಿಕವಾಗಿ ದುಸ್ಥಿತಿಯಲ್ಲಿದ್ದರೂ ೨೦೦೮ನೇ ಇಸವಿಯಲ್ಲಿ ಎಷ್ಟು ಸಂಘ ಸಂಸ್ಥೆಗಳಿಗೆ ದೇಣಿಗೆ ನೀಡಲಾಗಿದೆ ; (ಪೂರ್ಣ ವಿವರ ನೀಡುವುದು)

(ಈ) ದಿನಾಂಕ : ೧೨–೧೨–೨೦೦೮ರಲ್ಲಿ ೧೦ ಕೋಟಿ ರೂ.ಗಳ ಸಹಾಯಾರ್ಥ ಧನ ಪಡೆದ ಸಂಸ್ಥೆ ಯಾವುದು ;

(ಉ) ಹಾಗಿದ್ದಲ್ಲಿ, ಈ ಸಂಸ್ಥೆ ಸಾರ್ವಜನಿಕ ಸೇವೆಗೆ ಸೀಮಿತವಾಗಿದೆಯೇ ;

(ಊ) ಇಷ್ಟು ದೊಡ್ಡ ಮೊತ್ತದ ದೇಣಿಗೆ ನೀಡಲು ಸಾಮಾನ್ಯ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆಯೇ ; ಅಥವಾ ಯಾವುದಾದರೂ ಶಿಫಾರಸ್ಸನ್ನು ಪರಿಗಣಿಸಲಾಗಿದೆಯೇ ? (ಪೂರ್ಣ ವಿವರ ನೀಡುವುದು)

## ಸಚಿವರುಗಳಿಗೆ ಒದಗಿಸಿರುವ ವಾಹನಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) –**

೨೭೮ (೧೫೧೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಸಚಿವ ಸಂಪುಟದ ಸದಸ್ಯರಿಗೆ ಒದಗಿಸಲಾದ ವಾಹನಗಳೆಷ್ಟು ;

(ಆ) ಈ ಸಂಬಂಧ ಸರ್ಕಾರ ಖರ್ಚು ಮಾಡಿದ ಹಣ ಎಷ್ಟು ;

(ಇ) ಕಳೆದ ಒಂದು ವರ್ಷದಲ್ಲಿ ಮಂತ್ರಿ ಮಂಡಳದ ಸದಸ್ಯರಿಗೆ ಹೊಸದಾಗಿ ಖರೀದಿಸಿದ ವಾಹನಗಳು ಎಷ್ಟು ?

## ಅಕ್ರಮ ಮರಳು ಸಾಗಾಣಿಕೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) –**

೨೭೯ (೧೪೮೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಹಾಗೂ ಬಿಜಾಪುರ ಜಿಲ್ಲಾ ವ್ಯಾಪ್ತಿಯಲ್ಲಿ ಅಕ್ರಮ ಮರಳು ಸಾಗಾಣಿಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಅಕ್ರಮ ತಡೆಗಟ್ಟಲು ಸರ್ಕಾರವು ಯಾವ ಕ್ರಮಗಳನ್ನು ಜರುಗಿಸಿದೆ ?

## ಒಳಚರಂಡಿ ಯೋಜನೆ

**ಶ್ರೀ ಕೆ. ಪ್ರತಾಪಚಂದ್ರಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೦ (೧೫೦೪) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯ ಕುಂದಾಪುರ ಪುರಸಭೆಗೆ ಒಳಚರಂಡಿ ಯೋಜನೆ ಮಂಜೂರಾಗಿದೆಯೇ ; ಇಲ್ಲವಾದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು ;

(ಆ) ಸಮುದ್ರ ತೀರ ಪಟ್ಟಣವಾದ ಕುಂದಾಪುರದ ಪಶ್ಚಿಮ ಭಾಗದಲ್ಲಿ ಸಮುದ್ರವಿರುವುದರಿಂದ ನಗರವು ಉಳಿದ ಮೂರು ದಿಕ್ಕುಗಳಲ್ಲಿ ವೇಗವಾಗಿ ಬೆಳೆಯುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ನಗರದ ಬೆಳವಣಿಗೆಗೆ ಅನುಗುಣವಾಗಿ ಒಳಚರಂಡಿ ಯೋಜನೆಯನ್ನು ಯಾವ ರೀತಿಯಾಗಿ ರೂಪಿಸಲಾಗುವುದು ;

(ಇ) ಕುಂದಾಪುರ ಪುರಸಭಾ ವ್ಯಾಪ್ತಿಯಲ್ಲಿ ಒಳಚರಂಡಿ ಯೋಜನೆಯನ್ನು ರೂಪಿಸುವಾಗ ಪಕ್ಕದ ಗ್ರಾಮಗಳನ್ನು ಈ ಯೋಜನೆಗೆ ಸೇರಿಸುವ ಚಿಂತನೆ ಇದೆಯೇ ; ಇದ್ದಲ್ಲಿ, ಯಾವ ಯಾವ ಗ್ರಾಮಗಳನ್ನು ಸೇರಿಸಿಕೊಳ್ಳಲಾಗುವುದು ; ಇಲ್ಲವಾದಲ್ಲಿ, ಕಾರಣವೇನು ?

## ಸರ್ಕಾರಿ ನೌಕರರಿಗೆ ಮುಂಗಡ ಪತ್ರದಲ್ಲಿ ನೀಡುತ್ತಿರುವ ಅನುದಾನ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೧ (೧೪೬೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ನೌಕರರಿಗೆ ಮುಂಗಡ ಪತ್ರದಲ್ಲಿ ನೀಡುತ್ತಿರುವ ಒಟ್ಟಾರೆ ಹಣವೆಷ್ಟು ; (ವಿವರ ನೀಡುವುದು)

(ಆ) ಸರ್ಕಾರಿ ನೌಕರರ ವೇತನವಲ್ಲದೆ ಇತರೆಯಾಗಿ ಸರ್ಕಾರಿ ನೌಕರರಿಗೆ ನೀಡುತ್ತಿರುವ ಅನುದಾನವೆಷ್ಟು ? (ವಿವರ ನೀಡುವುದು)

## ಪಾವತಿ ಆಧಾರಿತ ಅತಿಥಿಗಳಿಗೆ ಭದ್ರತೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮೨ (೧೪೮೦) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪೇಯಿಂಗ್ ಗೆಸ್ಟ್‌ಗಳ ಸಂಖ್ಯೆ ಎಷ್ಟು ;

(ಆ) ಪಿ.ಜಿ. ಗಳನ್ನು ಸ್ಥಾಪಿಸಲು ಇರಬೇಕಾದ ಮಾನದಂಡಗಳೇನು ;

(ಇ) ಪಿ.ಜಿ. (ಪೇಯಿಂಗ್ ಗೆಸ್ಟ್) ಗಳಲ್ಲಿ ಅಕ್ರಮ ಅತ್ಯಾಚಾರಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಇಂತಹ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಪಿ.ಜಿ. ಗಳಿಗೆ ಭದ್ರತೆ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಹಿಳಾ ಕಾರ್ಮಿಕರ ಮೇಲಿನ ದೌರ್ಜನ್ಯ ಹಾಗೂ ಲೈಂಗಿಕ ಕಿರುಕುಳ

**ಡಾ. ಜೈಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೨೮೩ (೧೪೬೫) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಿಂದ ಬೆಂಗಳೂರು ಹಾಗೂ ಸುತ್ತಮುತ್ತಲಿನ ಗಾರ್ಮೆಂಟ್ಸ್‌ನಲ್ಲಿ ಕೆಲಸ ನಿರ್ವಹಿಸುತ್ತಿರುವ ಮಹಿಳೆಯರ ಮೇಲೆ ಸಂಸ್ಥೆಯ ಮೇಲಾಧಿಕಾರಗಳು ಹಾಗೂ ಇನ್ನಿತರೆ ಸಹ ಉದ್ಯೋಗಿಗಳಿಂದ ನಡೆದಿರುವ ದೌರ್ಜನ್ಯ ಹಾಗೂ ಲೈಂಗಿಕ ಕಿರುಕುಳದ ಬಗ್ಗೆ ದಾಖಲಾಗಿರುವ ಪ್ರಕರಣಗಳೆಷ್ಟು ;

(ಆ) ಕಳೆದ ೦೩ ವರ್ಷಗಳಿಂದ ಈ ಪ್ರಕರಣಗಳಲ್ಲಿ ಅವಮಾನಿತರಾಗಿ ಆತ್ಮಹತ್ಯಗೆ ಶರಣಾಗಿರುವ ಉದ್ಯೋಗಿಗಳ ಸಂಖ್ಯೆ ಎಷ್ಟು ?

## ರೈಲ್ವೆ ಮೇಲ್ಸೇತುವೆ ಕಾಮಗಾರಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೮೪ (೧೫೩೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಬಿ.ಎಂ.ಪಿ. ವ್ಯಾಪ್ತಿಯ ಬೆಂಡಿಗಾನಹಳ್ಳಿ ವಾರ್ಡ್‌ನಲ್ಲಿನ ಹಳೆ ಬೈಯಪ್ಪನಹಳ್ಳಿಯಲ್ಲಿ "ಹಳೆ ಮದ್ರಾಸು ರಸ್ತೆಯಿಂದ ಬಾಣಸವಾಡಿ" ಗೆ ಹೋಗುವ ರೈಲ್ವೆ ಮೇಲ್ಸೇತುವೆಯ ಕಾಮಗಾರಿಯು ಪ್ರಾರಂಭವಾಗಿ ಎಷ್ಟು ವರ್ಷಗಳಾಗಿರುತ್ತವೆ ;

(ಆ) ಸದರಿ ಕಾಮಗಾರಿಯು ಆರಂಭವಾಗಿ ಎರಡು ವರ್ಷಗಳಾಗಿದ್ದರೂ, ಇನ್ನೂ ಪೂರ್ಣವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸದರಿ ಕಾಮಗಾರಿಯು ಅರ್ಧಕ್ಕೆ ಸ್ಥಗಿತಗೊಂಡಿರಲು ಕಾರಣವೇನು ;

(ಇ) ಇದರಿಂದಾಗಿ ಕೋರಮಂಗಲ, ಇಂದಿರಾನಗರ, ಕೆ.ಆರ್.ಪುರ, ಅಲಸೂರು, ದೊಮ್ಮಲೂರು, ಕಲ್ಯಾಣನಗರ, ಹೆಬ್ಬಾಳ ರಿಂಗ್ ರಸ್ತೆಯ ಪ್ರಯಾಣಿಕರಿಗೆ ಸಾಕಷ್ಟು ತೊಂದರೆಯುಂಟಾಗಿರುತ್ತದೆ ; ಹಾಗಾಗಿ ಇದನ್ನು ಪೂರ್ಣಗೊಳಿಸಲು ಸರ್ಕಾರವು ತೆಗೆದುಕೊಳ್ಳುವ ಕ್ರಮವೇನು ;

(ಈ) ಇದನ್ನು ಪೂರ್ಣಗೊಳಿಸಲು ಇನ್ನೂ ಎಷ್ಟು ಕಾಲಾವಧಿ ಬೇಕಾಗಿದೆ ?

## ಆದಾಯ ಮೂಲಗಳು

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) –**

೨೮೫ (೧೫೨೧) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆದಾಯ ಮೂಲಗಳು ಯಾವುವು ; ವಾರ್ಷಿಕವಾಗಿ ಪ್ರತಿ ಮೂಲಗಳ ಆದಾಯದ ಅಂದಾಜು ಪ್ರಮಾಣಗಳನ್ನು ತಿಳಿಸುವುದು ;

(ಆ) ಮತ್ತಷ್ಟು ಹೊಸ ಆದಾಯ ಮೂಲಗಳನ್ನು ಹುಡುಕಲು ಸರ್ಕಾರ ಯಾವ ಯೋಜನೆಗಳನ್ನು ಹಾಕಿಕೊಂಡಿದೆ ಅಥವಾ ಚಿಂತಿಸಿದೆ ;

(ಇ) ರಾಜ್ಯದ ಖಾಸಗಿ ಕಾರ್ಪೋರೇಟ್ ವಲಯಗಳ ಆದಾಯದಲ್ಲಿ ಶೇಕಡವಾರು ಆದಾಯವನ್ನು ಪಡೆಯಲು ಸರ್ಕಾರ ಏಕೆ ಚಿಂತಿಸಬಾರದು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 371, ಪ್ರತಿಗಳು– 1500 – ಪಿ8